ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ:DTE-ADMIOEST(4)/24/2022

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 06.05.2022

**ಸುತ್ತೋಲೆ**

**ವಿಷಯ :** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಕಾರ್ಯಗಾರ ವಿಭಾಗದ ಸಿಬ್ಬಂದಿಗಳ ಸೇವಾ ದಾಖಲಾತಿಗಳನ್ನು ತಂತ್ರಾಂಶದಲ್ಲಿ ಇಂದೀಕರಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರಸ್ತುತ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ(ತಿದ್ದುಪಡಿ) ನಿಯಮಗಳು, 2008 ರಂತೆ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಕಾರ್ಯಾಗಾರ ವಿಭಾಗದಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ. ಆದರೆ ಈಗಾಗಲೇ 2017 ಮತ್ತು 2019 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಕಾರ್ಯಾಗಾರ ವಿಭಾಗದ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಬರುವ ಜನರಲ್ ಮೆಕ್ಯಾನಿಕ್, ಇನ್ಸ್‌ಟ್ರುಮೆಂಟ್ ಟೆಕ್ನಾಲಜಿ, ಫಿಟ್ಟರ್, ಕಾರ್ಪೆಂಟ್ರಿ, ಮೆಷಿನ್ ಶಾಪ್, ಸ್ಮಿತಿ, ವೆಲ್ಡಿಂಗ್ & ಶೀಟ್ ಮೆಟಲ್, ಫೌಂಡ್ರಿ, ಹೀಟ್ ಪವರ್ ಟೆಕ್ನಾಲಜಿ ಟ್ರೇಡ್‌ಗಳ ಪ್ರತ್ಯೇಕ ಜೇಷ್ಠತಾ ಪಟ್ಟಿಯನ್ನು ಹೊರಡಿಸಲಾಗಿದ್ದು, ಸಂಯೋಜಿತ ಜೇಷ್ಠತಾ ಪಟ್ಟಿಯನ್ನು ಹೊರಡಿಸಿರುವುದಿಲ್ಲ. ಅದೇ ಗಣಕಯಂತ್ರ ವಿಜ್ಞಾನ ವಿಭಾಗದಲ್ಲಿ ಬರುವ ಗಣಕಯಂತ್ರ ವಿಜ್ಞಾನದ ಪ್ರತ್ಯೇಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ವಿಭಾಗದಲ್ಲಿ ಬರುವ ಸಿಸ್ಟಂ ಅನಾಲಿಸ್ಟ್ ಸಿಬ್ಬಂದಿಗಳ ಹೆಸರುಗಳನ್ನು ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡಿಸಿ ಜೇಷ್ಠತಾ ಪಟ್ಟಿಯನ್ನು ಹೊರಡಿಸಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ 2008 ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗ ಮತ್ತು ಗಣಕಯಂತ್ರ ವಿಜ್ಞಾನ ವಿಭಾಗದಲ್ಲಿ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ಕಾರ್ಯಾಗಾರ ವಿಭಾಗದ ಮೆಕ್ಯಾನಿಕಲ್ & ಅಲೈಡ್ ಬ್ರಾಂಚ್ ಮತ್ತು ಗಣಕಯಂತ್ರ ವಿಜ್ಞಾನ ವಿಭಾಗದ ಜೇಷ್ಠತಾ ಪಟ್ಟಿ ತಯಾರಿಸಲು ಹಾಗೂ ಮುಂಬಡ್ತಿ ಪ್ರಕ್ರಿಯೆಯನ್ನು ಕೈಕೊಳ್ಳುವ ಸದರಿ ಸಿಬ್ಬಂದಿಗಳ ಸೇವಾ ದಾಖಲಾತಿಗಳನ್ನು "https://dtetech.karnataka.gov.in/dteone/emp/login.aspx" ತಂತ್ರಾಂಶದಲ್ಲಿ ಕಡ್ಡಾಯವಾಗಿ ಇಂದೀಕರಿಸಲು ಪ್ರಾಂಶುಪಾಲರಿಗೆ ಸೂಚಿಸಲು ದಿನಾಂಕ: 14.05.2022 ರೊಳಗಾಗಿ ಇಂಡೀಕರಿಸಲು ಸೂಚಿಸಲಾಗಿದೆ.

**"ಟಿಪ್ಪಣಿ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.

ಪ್ರತಿ:

ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು